# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೃಷ್ಣರಾಜಸಾಗರ ಅಣೆಕಟ್ಟೆಯ ಬೃಂದಾವನ ಉದ್ಯಾನವನವನ್ನು ಪಿ.ಪಿ.ಪಿ ಮಾದರಿಯಲ್ಲಿ ವಿಶ್ವದರ್ಜೆಗೆ ಉನ್ನತೀಕರಿಸುವ ಕಾಮಗಾರಿಯನ್ನು ಅನುಷ್ಠಾನಗೊಳಿಸುವಲ್ಲಿ ಉಂಟಾಗುವ ಸಮಸ್ಯೆಗಳನ್ನು ನಿಯಂತ್ರಿಸಲು ಸಲಹಾ ಸಮಿತಿಯನ್ನು ರಚಿಸುವ ಬಗ್ಗೆ.

** ** **

ಓದಲಾಗಿದೆ :-

ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು, ಇವರ ಪತ್ರ ಸಂಖ್ಯೆ: ಕಾನೀನಿನಿ/ತಾಂತ್ರಿಕ-04/Brindavan Garden/PART-B/2018-19/3254, ದಿನಾಂಕ:28-12-2018.

ಪ್ರಸ್ತಾವನೆ :-

ಮೇಲೆ ಓದಲಾದ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು, ಇವರು ಉಲ್ಲೇಖಿತ ವಿಷಯದ ಬಗ್ಗೆ ಪ್ರಸ್ತಾವನೆ ಸಲ್ಲಿಸುತ್ತಾ, ಕೃಷ್ಣರಾಜಸಾಗರ ಅಣೆಕಟ್ಟೆಯ ಬೃಂದಾವನ ಉದ್ಯಾನವನವನ್ನು ಪಿ.ಪಿ.ಪಿ ಮಾದರಿಯಲ್ಲಿ ವಿಶ್ವದರ್ಜೆಗೆ ಉನ್ನತೀಕರಿಸುವ ಕಾಮಗಾರಿಯನ್ನು ಅನುಷ್ಠಾನಗೊಳಿಸುವಲ್ಲಿ ಉಂಟಾಗುವ ಸಮಸ್ಯೆಗಳನ್ನು ನಿಯಂತ್ರಿಸಲು ಮಾನ್ಯ ಜಲಸಂಪನ್ಮೂಲ ಸಚಿವರ ಅಧ್ಯಕ್ಷತೆಯಲ್ಲಿ ಸಲಹಾ ಸಮಿತಿಯನ್ನು ರಚಿಸುವ ಬಗ್ಗೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

2. ಸದರಿ ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

## ಸರ್ಕಾರಿ ಆದೇಶ ಸಂಖ್ಯೆ : ಜಸಂಇ 96 ಎಂಎಂಕೆ 2018, ಬೆಂಗಳೂರು, ದಿನಾಂಕ : 01-01-2019

ಕೃಷ್ಣರಾಜಸಾಗರ ಅಣೆಕಟ್ಟೆಯ ಬೃಂದಾವನ ಉದ್ಯಾನವನವನ್ನು ಪಿ.ಪಿ.ಪಿ ಮಾದರಿಯಲ್ಲಿ ವಿಶ್ವದರ್ಜೆಗೆ ಉನ್ನತೀಕರಿಸುವ ಕಾಮಗಾರಿಯನ್ನು ಅನುಷ್ಠಾನಗೊಳಿಸುವಲ್ಲಿ ಉಂಟಾಗಬಹುದಾದ ಸಮಸ್ಯೆಗಳನ್ನು ನಿಯಂತ್ರಿಸಲು ಈ ಕೆಳಕಂಡ ಸದಸ್ಯರುಗಳನ್ನೊಳಗೊಂಡ ಕೃಷ್ಣರಾಜಸಾಗರ ಬೃಂದಾವನ ಉದ್ಯಾನವನ ಉನ್ನತೀಕರಣ ಸಲಹಾ ಸಮಿತಿಯನ್ನು ಈ ಕೂಡಲೇ ಜಾರಿಗೆ ಬರುವಂತೆ ರಚಿಸಲಾಗಿದೆ :

| ಕ್ರ. ಸಂ | ಸದಸ್ಯರ ಹೆಸರು / ಪದನಾಮ | ಷರಾ |
|---|---|---|
| 1 | ಶ್ರೀ ಡಿ.ಕೆ.ಶಿವಕುಮಾರ್<br>ಮಾನ್ಯ ಜಲಸಂಪನ್ಮೂಲ ಸಚಿವರು | ಅಧ್ಯಕ್ಷರು |
| 2 | ಶ್ರೀ ಸಿ.ಎಸ್.ಪುಟ್ಟರಾಜು,<br>ಮಾನ್ಯ ಸಣ್ಣ ನೀರಾವರಿ ಸಚಿವರು ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರು | ಸದಸ್ಯರು |
| 3 | ಶ್ರೀ ಜಿ.ಟಿ.ದೇವೇಗೌಡ,<br>ಮಾನ್ಯ ಉನ್ನತ ಶಿಕ್ಷಣ ಸಚಿವರು ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರು | ಸದಸ್ಯರು |
| 4 | ಶ್ರೀ ಡಿ.ಸಿ.ತಮ್ಮಣ್ಣ, ಮಾನ್ಯ ಸಾರಿಗೆ ಸಚಿವರು | ಸದಸ್ಯರು |
| 5 | ಶ್ರೀ ಸಾ.ರಾ.ಮಹೇಶ್,<br>ಮಾನ್ಯ ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು ಹಾಗೂ ಕೊಡಗು ಜಿಲ್ಲಾ ಉಸ್ತುವಾರಿ ಸಚಿವರು | ಸದಸ್ಯರು |
| 6 | ಶ್ರೀ ಆರ್.ಎಲ್.ಶಿವರಾಮೇಗೌಡ, ಮಾನ್ಯ ಲೋಕಸಭಾ ಸದಸ್ಯರು, ಮಂಡ್ಯ | ಸದಸ್ಯರು |
| 7 | ಶ್ರೀ ಪ್ರತಾಪ್ ಸಿಂಹ, ಮಾನ್ಯ ಲೋಕಸಭಾ ಸದಸ್ಯರು, ಮೈಸೂರು | ಸದಸ್ಯರು |
| 8 | ಶ್ರೀ ಎಂ.ಶ್ರೀನಿವಾಸ್, ಮಾನ್ಯ ವಿಧಾನಸಭಾ ಸದಸ್ಯರು, ಮಂಡ್ಯ | ಸದಸ್ಯರು |
| 9 | ಶ್ರೀ ರವೀಂದ್ರ ಶ್ರೀಕಂಠಯ್ಯ, ಮಾನ್ಯ ವಿಧಾನಸಭಾ ಸದಸ್ಯರು, ಶ್ರೀರಂಗಪಟ್ಟಣ | ಸದಸ್ಯರು |

| ಕ್ರ ಸಂ | ಸದಸ್ಯರ ಹೆಸರು / ಪದನಾಮ | ಷರಾ |
|---|---|---|
| 10 | ರಾಜಮಾತೆ ಡಾ॥ ಪ್ರಮೋದದೇವಿ ಒಡೆಯರ್, ಮೈಸೂರು ಅಥವಾ ಅವರು ಸೂಚಿಸುವ ಮೈಸೂರು ರಾಜಮನೆತನದ ಕುಟುಂಬದ ಸದಸ್ಯರು | ಸದಸ್ಯರು |
| 11 | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಇಂಧನ ಇಲಾಖೆ | ಸದಸ್ಯರು |
| 12 | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಮೂಲಸೌಲಭ್ಯ ಅಭಿವೃದ್ಧಿ ಇಲಾಖೆ | ಸದಸ್ಯರು |
| 13 | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ | ಸದಸ್ಯರು |
| 14 | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ತೋಟಗಾರಿಕೆ ಇಲಾಖೆ | ಸದಸ್ಯರು |
| 15 | ಸರ್ಕಾರದ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ | ಸದಸ್ಯರು |
| 16 | ಸರ್ಕಾರದ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ | ಸದಸ್ಯರು |
| 17 | ಸರ್ಕಾರದ ಕಾರ್ಯದರ್ಶಿಗಳು, ಪ್ರವಾಸೋದ್ಯಮ ಇಲಾಖೆ | ಸದಸ್ಯರು |
| 18 | ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ, ಮಂಡ್ಯ | ಸದಸ್ಯರು |
| 19 | ಜಿಲ್ಲಾಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು | ಸದಸ್ಯರು |
| 20 | ಪೊಲೀಸ್ ಅಧೀಕ್ಷಕರು, ಮಂಡ್ಯ | ಸದಸ್ಯರು |
| 21 | ಪೊಲೀಸ್ ಅಧೀಕ್ಷಕರು, ಮೈಸೂರು | ಸದಸ್ಯರು |
| 22 | Professor, University of Mysore, Tourism Department, Mysore | ಸದಸ್ಯರು |
| 23 | ಒಡೆಯರ್ ಕುಟುಂಬದವರು ಸ್ಥಾಪಿಸಿರುವ Sri Venugopalaswamy Temple Trust, Backwaters of KRS Dam, New Kannambaadi ಇವರ ಪ್ರತಿನಿಧಿ | ಸದಸ್ಯರು |
| 24 | Professor, NIRM (National Institute of Rock Mechanics), Bengaluru. | ಸದಸ್ಯರು |
| 25 | Chairman, Institute of Engineers, Mysore Local Centre, Mysore | ಸದಸ್ಯರು |
| 26 | Representative from Airport Authority of India | ಸದಸ್ಯರು |
| 27 | Representative from Indian Railways | ಸದಸ್ಯರು |
| 28 | ಮುಖ್ಯ ಇಂಜಿನಿಯರ್, ನೀರಾವರಿ (ದಕ್ಷಿಣ) ವಲಯ, ಮೈಸೂರು | ಸದಸ್ಯರು |
| 29 | ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು | ಸದಸ್ಯ ಕಾರ್ಯದರ್ಶಿ |

2. ಸದರಿ ಸಮಿತಿಯ ಅಧಿಕಾರೇತರ ಸದಸ್ಯರ ಪ್ರವಾಸ ಭತ್ಯೆ ಮತ್ತು ಇತರೆ ಭತ್ಯೆಗಳನ್ನು ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ 2 ಎಸ್‌ಆರ್‌ಎ 2000, ದಿನಾಂಕ:03-02-2001, ರನ್ವಯ ಪಾವತಿ ಮಾಡತಕ್ಕದ್ದು. ಈ ಬಗ್ಗೆ ತಗಲುವ ವೆಚ್ಚವನ್ನು ಕಾವೇರಿ ನೀರಾವರಿ ನಿಗಮ ನಿಯಮಿತದಡಿ ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ.ಹರಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-2)
ಜಲ ಸಂಪನ್ಮೂಲ ಇಲಾಖೆ.

ಇವರಿಗೆ :-

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ ಲೆಕ್ಕಪರಿಶೋಧನ), ಕರ್ನಾಟಕ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು.
3. ಸಮಿತಿಯ ಎಲ್ಲಾ ಸದಸ್ಯರುಗಳಿಗೆ – ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರ ಮುಖಾಂತರ
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು